ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೬೧ Volume 161	ಬೆಂಗಳೂರು, ಸೋಮವಾರ, ೨೭, ಜುಲೈ, ೨೦೨೬ (ಶ್ರಾವಣ, ೦೫, ಶಕವರ್ಷ, ೧೯೪೮) BENGALURU, MONDAY, 27, JULY, 2026 (SHRAVANA ,05,ShakaVarsha,1948)	ಸಂಚಿಕೆ ೧೪೫ Issue 145

ಭಾಗ ೩

ಸರ್ಕಾರದ ಆಯಾ ಇಲಾಖೆಗಳ ಮುಖ್ಯಸ್ಥರ ಮತ್ತು ಸ್ಥಳೀಯ ಪ್ರಾಧಿಕಾರಿಗಳಿಗೆ ಸಂಬಂಧಿಸಿದ ಅಧಿಸೂಚನೆಗಳು

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,

ವಾರ್ಡ್ ನಂ. 20, ಅಂಬಿಕಾ ಲೇಔಟ್, ಸೌತೇಗೌಡನಹಳ್ಳಿ ಗ್ರಾಮ, ಸೂಲಿಬೆಲೆ ರಸ್ತೆ, ಕಸಬಾ ಹೋಬಳಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110

" ಸಾರ್ವಜನಿಕ ಪ್ರಕಟಣೆ "

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1) ರಡಿ)

ಸಂ. ಬಿಐಎಎಪಿಎ/ಟಿಪಿ/ಮ.ಯೋ.ಪ/01/2013–14/2026–27 **ದಿನಾಂಕ:22–7–2026**

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ಅನುಮೋದಿತ ಮಹಾಯೋಜನೆಯಲ್ಲಿ ನಗರೀಕರಣ ಎಲ್ಲೆಯ ಹೊರಭಾಗದಲ್ಲಿನ ವ್ಯವಸಾಯ ವಲಯದಲ್ಲಿ ಪ್ರಸ್ತಾಪಿತ ರಸ್ತೆ ಪರಿಚಲನಾ ಜಾಲದ ನಕ್ಷೆಗಳಿಗೆ ಸರ್ಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರಡಿ ಸರ್ಕಾರದ ಆದೇಶ ಸಂಖ್ಯೆ: ನಅಇ 386 ಬಿಎಂಆರ್ 2025(ಇ), ಬೆಂಗಳೂರು ದಿನಾಂಕ:07/07/2026 ರಂದು ತಾತ್ಕಾಲಿಕ ಅನುಮೋದನೆಯನ್ನು ನೀಡಿರುತ್ತದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರಡಿಯಲ್ಲಿ ಸರ್ಕಾರದಿಂದ ತಾತ್ಕಾಲಿಕವಾಗಿ ಅನುಮೋದನೆಯಾಗಿರುವ ನಕ್ಷೆಗಳನ್ನು ಪ್ರಾಧಿಕಾರದ ಕಛೇರಿಯಲ್ಲಿ ವೀಕ್ಷಣೆಗೆ ಇಡಲಾಗಿದೆ. ಹಾಗೂ ಈ ಯೋಜನಾ ಪ್ರಾಧಿಕಾರದ ಜಾಲತಾಣ https://biaapa.tpa.gov.in/ ರಲ್ಲಿ ಸಹಾ ವೀಕ್ಷಿಸಬಹುದಾಗಿದೆ. ಸದರಿ ನಕ್ಷೆಗಳ ಬಗ್ಗೆ ಸಾರ್ವಜನಿಕರು ಸಲಹೆ / ಆಕ್ಷೇಪಣೆಗಳನ್ನು ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 60 ದಿನಗಳ ಒಳಗಾಗಿ ಪೂರಕ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿರುತ್ತದೆ.

ಸಾರ್ವಜನಿಕರು ತಮ್ಮ ಸಲಹೆ / ಆಕ್ಷೇಪಣೆಗಳನ್ನು ಪ್ರಾಧಿಕಾರಕ್ಕೆ ಖುದ್ದಾಗಿ ಅಥವಾ ನೊಂದಣಿ ಅಂಚೆಯ ಮೂಲಕ ಸದಸ್ಯ–ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ವಾರ್ಡ್ ನಂ. 20, ಅಂಬಿಕಾ ಲೇಔಟ್, ಸೌತೇಗೌಡನಹಳ್ಳಿ ಗ್ರಾಮ, ಸೂಲಿಬೆಲೆ ರಸ್ತೆ, ಕಸಬಾ ಹೋಬಳಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110, ಅಥವಾ biaapa.masterplan@gmail.com ಇ–ಮೇಲ್ ಮೂಲಕ ಪ್ರಾಧಿಕಾರಕ್ಕೆ ಸಲ್ಲಿಸಬಹುದಾಗಿದೆ. ನಿಗಧಿತ ಅವಧಿ ಮುಗಿದ ನಂತರ ಸಲ್ಲಿಸುವ ಆಕ್ಷೇಪಣೆ/ಸಲಹೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/–
ಅಧ್ಯಕ್ಷರು
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.

ಸಹಿ/–
ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು,
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.

PD-110

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 29 ಮುಆಬಿ 2026

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:21.07.2026

ಅಧಿಸೂಚನೆ

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಅಧಿನಿಯಮ 1997ರ ಕಲಂ 31(7) ರನ್ವಯ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿರುವ ಅಧಿಸೂಚಿತ ಸಂಸ್ಥೆಗಳ ಕೊಪ್ಪಳ ಜಿಲ್ಲೆಯ ಕುಷ್ಟಗಿ-122, ಕೊಪ್ಪಳ ತಾಲ್ಲೂಕಿನ - 166, ಕಾರಟಗಿ ತಾಲ್ಲೂಕಿನ-25, ಗಂಗಾವತಿ ತಾಲ್ಲೂಕಿನ- 22, ಯಲಬುರ್ಗಾ ತಾಲ್ಲೂಕಿನ-05 ಒಟ್ಟು 340 ಆಸ್ತಿಗಳ ವಿವರಗಳನ್ನು ಸಾರ್ವಜನಿಕರ ಮತ್ತು ಭಕ್ತಾದಿಗಳ ಮಾಹಿತಿಗಾಗಿ ಪ್ರಕಟಿಸಿ ಹೊರಡಿಸಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 29 ಮುಆಬಿ 2026, ದಿನಾಂಕ:18.05.2026ರಲ್ಲಿ **ಕರಡು ಅಧಿಸೂಚನೆ** ಎಂದಿರುವುದನ್ನು "**ಅಧಿಸೂಚನೆ"** ಎಂದು ತಿದ್ದಿ ಓದಿಕೊಳ್ಳತಕ್ಕದ್ದು".

ಉಳಿದಂತೆ ಮೂಲ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಾಲಾ ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

PR-1018

ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಯವರ ಕಾರ್ಯಾಲಯ, ಜಿಲ್ಲಾ ಕಛೇರಿಗಳ ಸಂಕೀರ್ಣ, ಬೆಂಗಳೂರು ದಕ್ಷಿಣ ಜಿಲ್ಲೆ

ಸಂ. ರಾಜಿಕ/ಚುಶಾ/ಸಿಆರ್/02/2026 [ಇ-985002] ದಿನಾಂಕ: 18-07-2026

ಪರಿಷ್ಕೃತ ಅಧಿಕೃತ ಜ್ಞಾಪನ

ವಿಷಯ: ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಯನ್ನು ನೇಮಿಸುವ ಕುರಿತು.

ಉಲ್ಲೇಖ: 1. ಪೀಠಾಧಿಕಾರಿ (ಗ್ರಾ.ಪಂ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು ರವರ ಪತ್ರದ ಸಂಖ್ಯೆ: ಗ್ರಾಅಪಂ 1003 ಗ್ರಾಪಂಅ 2025, ದಿನಾಂಕ: 16-01-2026

2. ಈ ಕಛೇರಿ ಪರಿಷ್ಕೃತ ಅಧಿಕೃತ ಜ್ಞಾಪನ ಪತ್ರದ ಸಮಸಂಖ್ಯೆ ದಿನಾಂಕ: 12-02-2026 & 30-04-2026

******

ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯಿತಿಗಳಿಗೆ ಉಲ್ಲೇಖ (2)ರ ಅಧಿಕೃತ ಜ್ಞಾಪನದಂತೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಕೆಳಕಂಡ ಕೋಷ್ಟಕದ ಅಂಕಣ (4) **ರಲ್ಲಿ ತೋರಿಸಿರುವ ಅಧಿಕಾರಿಗಳ ಬದಲಿಗೆ ಅಂಕಣ (5) ರಲ್ಲಿ ತೋರಿಸಿರುವ ಅಧಿಕಾರಿಗಳನ್ನು ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಯಾನ್ನಾಗಿ**

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 **ರ ಉಪಬಂಧಗಳ ಮೇರೆಗೆ ಈ ಪ್ರಕರಣ** 8 (1) (**ಬಿ**) **ಮತ್ತು** 47 **ರಂತೆ ನೇಮಕ ಮಾಡಿ ಆದೇಶಿಸಿದೆ.**

ಈ ಅಧಿಸೂಚನೆಯ ಮೂಲಕ ನೇಮಕ ಮಾಡಿರುವ ಅಂದರೆ ಅಂಕಣ (5) ರಲ್ಲಿ ನಮೂದಿಸಿರುವ ಅಧಿಕಾರಿಗಳು ಗ್ರಾಮ ಪಂಚಾಯತಿಗಳ ಆಡಳಿತಾಧಿಕಾರಿಯಾಗಿ ಪ್ರಭಾರವನ್ನು ವಹಿಸಿಕೊಂಡು ಮುಂದಿನ ಆದೇಶದವರೆಗೆ ಅಥವಾ ಈ ಗ್ರಾಮ ಪಂಚಾಯತಿಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಹುದ್ದೆಗಳಿಗೆ ಚುನಾವಣೆಯು ನಡೆಯುವವರೆಗೆ ಸರ್ಕಾರದ ಸುತ್ತೋಲೆ ನೀಡಿರುವ ನಿರ್ದೇಶನಗಳಂತೆ ಆಡಳಿತಾಧಿಕಾರಿಯಾಗಿ ಪ್ರಭಾರವನ್ನು ವಹಿಸಿಕೊಂಡು ಸರ್ಕಾರದ ಸುತ್ತೋಲೆ ಮತ್ತು ನಿಯಮಾವಳಿಯಂತೆ ಕರ್ತವ್ಯ ನಿರ್ವಹಿಸುವಂತೆ ನಿರ್ದೇಶಿಸಿದೆ. ಉಳಿದಂತೆ ಉಲ್ಲೇಖ (2) **ರ ಅಧಿಕೃತ ಜ್ಞಾಪನದಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.**

ಕ್ರ ಸಂ	**ತಾಲ್ಲೂಕು**	**ಗ್ರಾಮ ಪಂಚಾಯಿತಿ ಹೆಸರು**	**ನೇಮಕಾತಿ ಮಾಡಲಾಗಿದ್ದ ಆಡಳಿತ ಅದಿಕಾರಿಯ ಪದನಾಮ**	**ಬದಲಿ ನೇಮಕ ಮಾಡಲಾದ** ಆಡಳಿತಾಧಿಕಾರಿಯ **ಪದನಾಮ**
1	**2**	**3**	**4**	**5**
1	ರಾಮನಗರ	**ಕೂಟಗಲ್**	ಜಿಲ್ಲಾ ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ	**ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ರಾಮನಗರ ತಾಲ್ಲೂಕು**
2	ಚನ್ನಪಟ್ಟಣ	ಮತ್ತಿಕೆರೆ	ಜಿಲ್ಲಾಧಿಕಾರಿಗಳ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂ ದಾಖಲೆಗಳ ಉಪ ನಿರ್ದೇಶಕರು , ಜಿಲ್ಲಾಧಿಕಾರಿಗಳ ಕಛೇರಿ, ಬೆಂಗಳೂರು ದಕ್ಷಿಣ ಜಿಲ್ಲೆ	**ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚನ್ನಪಟ್ಟಣ ತಾಲ್ಲೂಕು**
3	ಕನಕಪುರ	ದೊಡ್ಡಾಲಹಳ್ಳಿ	ತಾಲ್ಲೂಕು ಆರೋಗ್ಯಾಧಿಕಾರಿ, ಕನಕಪುರ ತಾಲ್ಲೂಕು	**ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕನಕಪುರ ತಾಲ್ಲೂಕು**
4	ಮಾಗಡಿ	ಶ್ರೀಗಿರಿಪುರ	ಜಂಟಿ ನಿರ್ದೇಶಕರು, ತೋಟಗಾರಿಕಾ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ.	**ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮಾಗಡಿ ತಾಲ್ಲೂಕು**

ಆಡಳಿತಾಧಿಕಾರಿಯಾಗಿ ಪ್ರಭಾರ ವಹಿಸಿಕೊಂಡ ದಿನ ಆಯಾ ಗ್ರಾಮ ಪಂಚಾಯತಿಯ ನಡವಳಿ ವಹಿಯಲ್ಲಿ ಪ್ರಭಾರ ವಹಿಸಿಕೊಂಡಿದ್ದನ್ನು ಅಧಿಕೃತವಾಗಿ ದಾಖಲಿಸುವುದು ಮತ್ತು ಆಡಳಿತಾಧಿಕಾರಿಯಾಗಿ ಪ್ರಭಾರ ವಹಿಸಿಕೊಂಡ ಬಗ್ಗೆ ಈ ಕಛೇರಿಗೆ ವರದಿ ಸಲ್ಲಿಸಲು ನಿರ್ದೇಶಿಸಿದೆ.

ಜಿಲ್ಲಾಧಿಕಾರಿ
ಬೆಂಗಳೂರು ದಕ್ಷಿಣ ಜಿಲ್ಲೆ

PR-1019

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

P S BASAVARAJU